ಸೆಪ್ಟೆಂಬರ್ - 2020

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ

# ಸ್ವಚ್ಛತಾವಾಣಿ

ವಾರ್ತಾಪತ್ರ

## "ವಿಶೇಷ ಸಾಮಾಜಿಕ ಮಾಧ್ಯಮ ಸ್ಪರ್ಧೆ"

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಜಿಲ್ಲಾವಾರು ಫೇಸ್‌ಬುಕ್ ಪೇಜ್‌ಗಳನ್ನು ಹೆಚ್ಚೆಚ್ಚು ಪ್ರಚಾರ ಮಾಡುವ ಉದ್ದೇಶದಿಂದ ಹಾಗೂ ಜಿಲ್ಲೆಗಳ ನಡುವೆ ಸ್ಪರ್ಧೆ ಏರ್ಪಡಿಸುವ ದೃಷ್ಟಿಯಿಂದ ದಿನಾಂಕ: 16/07/2020 ರಿಂದ 15/09/2020ರ ವರೆಗೆ ಫೇಸ್‌ಬುಕ್ ಪೇಜ್ ಹಿಂಬಾಲಕರನ್ನು ವೃದ್ಧಿಸುವ ಸ್ಪರ್ಧೆ ಏರ್ಪಡಿಸಲಾಗಿತ್ತು. ದಿನಾಂಕ: 15/09/2020ರ ಸಂಜೆ 5.30ಕ್ಕೆ ಸ್ಪರ್ಧೆಯ ಅವಧಿಯು ಪೂರ್ಣಗೊಂಡಿದ್ದು, ಸ್ಪರ್ಧೆಯ ಅವಧಿಯಲ್ಲಿ ಅತಿ ಹೆಚ್ಚು ಹಿಂಬಾಲಕರನ್ನು ಹೆಚ್ಚಿಸಿದ ಮೂರು ಜಿಲ್ಲೆಗಳಿಗೆ ಕ್ರಮವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನವನ್ನು ನೀಡಲು ನಿರ್ಧರಿಸಲಾಗಿದೆ. ಸ್ಪರ್ಧೆಯ ಅವಧಿಯಲ್ಲಿ ಬಹುತೇಕ ಜಿಲ್ಲೆಗಳ ನಡುವೆ ಉತ್ತಮ ಸ್ಪರ್ಧೆ ಏರ್ಪಟ್ಟಿದ್ದು, ಸ್ಪರ್ಧೆಯ ಆರಂಭದ ದಿನದ ದತ್ತಾಂಶ ಮತ್ತು ಸ್ಪರ್ಧೆಯ ಅಂತ್ಯದ ದತ್ತಾಂಶಗಳನ್ನು ಪರಿಶೀಲಿಸಲಾಗಿ, ಸ್ಪರ್ಧೆಯ ಅವಧಿಯಲ್ಲಿ **18,354 ಹಿಂಬಾಲಕರನ್ನು ಹೊಂದುವ ಮೂಲಕ ಶಿವಮೊಗ್ಗ ಜಿಲ್ಲೆಯು ಪ್ರಥಮ ಸ್ಥಾನವನ್ನು ತನ್ನದಾಗಿಸಿಕೊಂಡಿದೆ. ಮಂಡ್ಯ ಜಿಲ್ಲೆಯು ಸ್ಪರ್ಧೆಯ ಅವಧಿಯಲ್ಲಿ 18,193 ಹಿಂಬಾಲಕರನ್ನು ಹೆಚ್ಚಿಸುವ ಮೂಲಕ ದ್ವಿತೀಯ ಸ್ಥಾನವನ್ನು ಪಡೆದುಕೊಂಡಿದೆ. ಕೊಡಗು ಜಿಲ್ಲೆಯು ಸ್ಪರ್ಧೆಯ ಅವಧಿಯಲ್ಲಿ 4,668 ಹಿಂಬಾಲಕರನ್ನು ಹೆಚ್ಚಿಸುವ ಮೂಲಕ ತೃತೀಯ ಸ್ಥಾನ ಪಡೆದುಕೊಂಡಿದೆ.**




## "IEC/HRD/SH ಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆ"

ಸ್ವಚ್ಛ ಭಾರತ ಮಿಷನ್(ಗ್ರಾ) ಮತ್ತು ಗ್ರಾಮೀಣ ಕುಡಿಯುವ ನೀರು ಯೋಜನೆಗಳ ಕುರಿತು ಗ್ರಾಮೀಣ ಜನರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಆಗಸ್ಟ್–2020 ಮಾಹೆಯಲ್ಲಿ ಹಮ್ಮಿಕೊಳ್ಳಲಾದ IEC/HRD/SH ಚಟುವಟಿಕೆಗಳು ಮತ್ತು ಕಾರ್ಯಕ್ರಮಗಳ ಕುರಿತ ದಿನಾಂಕ 18/09/2020 ರಂದು ಎಲ್ಲಾ ಜಿಲ್ಲೆಗಳ IEC/HRD/SH ಸಮಾಲೋಚಕರುಗಳೊಟ್ಟಿಗೆ ಪ್ರಗತಿ ಪರಿಶೀಲನಾ ಸಭೆಯನ್ನು ನಿರ್ದೇಶಕರು(ISA) ರವರ ನೇತೃತ್ವದಲ್ಲಿ ನಡೆಸಲಾಯಿತು.





## "ಸ್ವಚ್ಛೋತ್ಸವ– ನಿತ್ಯೋತ್ಸವ"

ರಾಜ್ಯದ ಪ್ರತಿಯೊಂದು ಗ್ರಾಮವು ಸ್ವಚ್ಛ, ಸುಂದರ, ಆರೋಗ್ಯಕರ ಮತ್ತು ತ್ಯಾಜ್ಯಮುಕ್ತವಾಗಿಸುವ ಉದ್ದೇಶದಿಂದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ರಾಜ್ಯಾದ್ಯಂತ ತ್ಯಾಜ್ಯ ವಿಲೇವಾರಿ ಘಟಕಗಳನ್ನು ಸ್ಥಾಪಿಸಲು ಕ್ರಮ ಕೈಗೊಂಡಿದೆ. ಹೀಗೆ ಸ್ಥಾಪಿಸಲಾಗುವ ತ್ಯಾಜ್ಯ ವಿಲೇವಾರಿ ಘಟಕದ ಸ್ವಚ್ಛ ಸಂಕೀರ್ಣವು ಏಕರೂಪದ ಬಣ್ಣ, ಚಿಹ್ನೆ, ಸಂದೇಶ ಮತ್ತು ವಿನ್ಯಾಸವನ್ನು ಹೊಂದಿರಬೇಕು ಎಂಬ ದೃಷ್ಟಿಯಿಂದ **"ತ್ಯಾಜ್ಯ ನಿರ್ವಹಣಾ ಘಟಕಗಳಲ್ಲಿ ಏಕರೂಪದ ಬ್ರಾಂಡಿಂಗ್"** ಮಾಡಲು ಇಲಾಖೆ ಮುಂದಾಗಿದೆ.

ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಘನ ಮತ್ತು ದ್ರವ ತ್ಯಾಜ್ಯದ ಸಮರ್ಪಕ ವಿಲೇವಾರಿ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು **2ನೇ ಅಕ್ಟೋಬರ್ 2020ರಿಂದ 31ನೇ ಅಕ್ಟೋಬರ್ 2020ರ ವರೆಗೆ "ಸ್ವಚ್ಛೋತ್ಸವ–ನಿತ್ಯೋತ್ಸವ"** ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಒಂದು ತಿಂಗಳ ಕಾಲ ನಡೆಯುವ ಮಾಸಾಚರಣೆ ಅವಧಿಯಲ್ಲಿ ಗ್ರಾಮ/ಗ್ರಾಮ ಪಂಚಾಯಿತಿಗಳ ಹಂತದಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗ್ರಾಮೀಣ ಸಮುದಾಯದಲ್ಲಿ ತ್ಯಾಜ್ಯ ನಿರ್ವಹಣೆ ಮತ್ತು ಸಮರ್ಪಕ ವಿಲೇವಾರಿ ಕುರಿತು ಶ್ರಮದಾನ, ವಸ್ತು ಪ್ರದರ್ಶನ, ಉದ್ಘಾಟನಾ ಕಾರ್ಯಕ್ರಮ, ಪ್ರಬಂಧ ಸ್ಪರ್ಧೆ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಕ್ರಮವಹಿಸುವಂತೆ ರಾಜ್ಯದ ಎಲ್ಲಾ 30 ಜಿಲ್ಲಾ ಪಂಚಾಯಿತಿಗಳಿಗೆ ಸೂಚನೆ ನೀಡಲಾಗಿದೆ.




## ತರಬೇತಿ ಕಾರ್ಯಕ್ರಮಗಳು:

### Orientation on JJM Operational Guidelines

ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಜಿಲ್ಲೆಗಳಿಗೆ ನೂತನವಾಗಿ ಆಯ್ಕೆಯಾಗಿರುವ ಐ.ಎಸ್.ಎಗಳಿಗೆ ಜಿಲ್ಲೆಗಳಲ್ಲಿ ಐ.ಎಸ್.ಎಗಳ ಪಾತ್ರ ಮತ್ತು ಜವಾಬ್ದಾರಿ ಹಾಗೂ JJM Operational Guidelines ಬಗ್ಗೆ ದಿನಾಂಕ: 14/9/2020ರಂದು ಮಾಹಿತಿ ನೀಡಲಾಯಿತು. ವೀಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಈ ಕಾರ್ಯಾಗಾರದಲ್ಲಿ ಜಿಲ್ಲೆಗಳಿಗೆ ನೂತನವಾಗಿ ನೇಮಕವಾಗಿರುವ ಐ.ಎಸ್.ಎಗಳ ಸಿಬ್ಬಂದಿ, ಎಲ್ಲಾ ಜಿಲ್ಲೆಗಳ ಕಾರ್ಯನಿರ್ವಾಹಕ ಅಭಿಯಂತರರು, AEE, JE, AE ಗಳು ಹಾಗೂ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ IEC, HRD ಸಮಾಲೋಚಕರುಗಳು ಪಾಲ್ಗೊಂಡಿದ್ದರು. ಈ ಕಾರ್ಯಾಗಾರದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ ಯುನಿಸೆಫ್ ರಾಜ್ಯ ಸಂಯೋಜಕರು ಹಾಗೂ AE ಸುಧಿನ್‌ರವರು JJM Operational Guidelines ಮತ್ತು ಐ.ಎಸ್.ಎಗಳ ಪಾತ್ರ ಮತ್ತು ಜವಾಬ್ದಾರಿ ಬಗ್ಗೆ ಮಾಹಿತಿ ನೀಡಿದರು. ಈ ಕಾರ್ಯಾಗಾರದಲ್ಲಿ 180ಕ್ಕೂ ಹೆಚ್ಚು ಮಂದಿ ಪಾಲ್ಗೊಂಡಿದ್ದರು.

## ವೈಯಕ್ತಿಕ ಶುಚಿತ್ವಕ್ಕಾಗಿ ಸಾಬೂನು ವಿತರಣೆ

ಇದಿಷ್ಟೇ ಅಲ್ಲದೆ ಕರೋನಾ ವಿರುದ್ಧ ಹೋರಾಡಲು ರಾಜ್ಯಾದ್ಯಂತ ಯುನಿಸೆಫ್ ವತಿಯಿಂದ 3.5 ಲಕ್ಷ ಸಾಬೂನುಗಳ ವಿತರಣೆ ವಿತರಣೆ ಮಾಡಲಾಗಿದೆ. ರಾಜ್ಯದ 30 ಜಿಲ್ಲೆಗಳಲ್ಲಿಯೂ ಈ ಸಾಬೂನುಗಳ ವಿತರಣೆಯಾಗಿದ್ದು, ವೈಯಕ್ತಿಕ ಶುಚಿತ್ವಕ್ಕೆ ಆದ್ಯತೆ ನೀಡಲಾಗಿದೆ.



